# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ/ಆ-1/52/ಸು/2021

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಬೆಂಗಳೂರು-560 001, **ದಿನಾಂಕ:20.01.2023.**

**ಸುತ್ತೋಲೆ**

ವಿಷಯ: ದಿನಾಂಕ:25.01.2023ರಂದು "ರಾಷ್ಟ್ರೀಯ ಮತದಾರರ ದಿನ"ವನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸಿಆಸುಇ:01:ಪಿಹೆಚ್‌ಎಲ್:2023, ದಿನಾಂಕ:18.01.2023.

*****

**ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಲ್ಲಿ ಪ್ರತಿ ವರ್ಷ ಜನವರಿ 25 ರಂದು** "ರಾಷ್ಟ್ರೀಯ ಮತದಾರರ ದಿನ"ವನ್ನಾಗಿ ಆಚರಿಸಲಾಗುತ್ತಿದ್ದು, ಅದರಂತೆ ಈ ವರ್ಷ **ದಿನಾಂಕ: 25.01.2023ರಂದು "ರಾಷ್ಟ್ರೀಯ ಮತದಾರರ ದಿನ"ವನ್ನು** ಕೋವಿಡ್-19ರ ಮಾರ್ಗಸೂಚಿಗಳನ್ನು ಪಾಲಿಸುವುದರೊಂದಿಗೆ ಆಚರಿಸಲು ಸೂಚಿಸಲಾಗಿರುತ್ತದೆ.

ಆದುದರಿಂದ, ದಿನಾಂಕ:25.01.2023ರ ಬುಧವಾರದಂದು ಬೆಳಿಗ್ಗೆ:11.00ಗಂಟೆಗೆ ವಿಧಾನ ಸೌಧದ ಮೊದಲನೇ ಮಹಡಿಯಲ್ಲಿರುವ ಸೆಂಟ್ರಲ್ ಹಾಲ್‌ನಲ್ಲಿ **"ರಾಷ್ಟ್ರೀಯ ಮತದಾರರ ದಿನ"** ಆಚರಣೆಯ ಸಂಬಂಧ ಪ್ರಮಾಣ ವಚನ ಸ್ವೀಕರಿಸಲು ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳು ಭಾಗವಹಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ. (ರಾಷ್ಟ್ರೀಯ ಮತದಾರರ ದಿನದ ಪ್ರತಿಜ್ಞೆಗೆ ಮಾಡುವುದಕ್ಕಾಗಿ ಪುಟ ತಿರುಗಿಸಿ ನೋಡಿ)

(ಕೆ.ಜೆ. ಜಲಜಾಕ್ಷಿ) 20/1/23
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ಗೆ:

ವಿಧಾನ ಪರಿಷತ್ತಿನ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳಿಗೆ (ಶಾಸಕರ ಭವನವು ಸೇರಿದಂತೆ)

<u>ಪ್ರತಿಗಳು:</u>

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
2. ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರಿಗೆ, ಕವಿಪ.
3. ಅಪರ/ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರಿಗೆ, ಕವಿಪ.
4. ರಕ್ಷಾ ಕಡತಕ್ಕೆ/ಸೂಚನಾ ಫಲಕಕ್ಕೆ/ಬಿಡಿ ಪ್ರತಿಗಳು.

# "ರಾಷ್ಟ್ರೀಯ ಮತದಾರರ ದಿನದ ಪ್ರತಿಜ್ಞೆ"

ಪ್ರಜಾಪ್ರಭುತ್ವದಲ್ಲಿ ದೃಢವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೆ ಮತ ಚಲಾಯಿಸುತ್ತೇವೆಂದು ಈ ಮೂಲಕ ಪ್ರತಿಜ್ಞೆ ಸ್ವೀಕರಿಸುತ್ತೇವೆ.